# All India Radio: Bangalore
## National Bulletins In Kannada
## 25.06.2025 / 1.10pm
## ಆಕಾಶವಾಣಿ, ಬೆಂಗಳೂರು
## ರಾಷ್ಟ್ರೀಯ ವಾರ್ತೆಗಳು
## 25.06.2025 / 1.10pm

<><*<><>*><>

1. ಆಕ್ಸಿಯಂ-೪ ಮಿಷನ್ ಯಶ್ವಸಿ ಉಡಾವಣೆ: ಭಾರತದ ಶುಭಾಂಶು ಶುಕ್ಲಾ ಸೇರಿ ನಾಲ್ವರು ಗಗನಯಾತ್ರಿಗಳು ಬಾಹ್ಯಾಕಾಶ ನಿಲ್ದಾಣಕ್ಕೆ ಪ್ರಯಾಣ
2. ಸಂವಿಧಾನ ಹತ್ಯಾ ದಿನ: ದೇಶಾದ್ಯಂತ ಜಾಗೃತಿ ಕಾರ್ಯಕ್ರಮಗಳ ಆಯೋಜನೆ
3. ಅಪರೇಷನ್ ಸಿಂಧು: ಇಸ್ರೇಲ್‌ನಿಂದ ಸ್ವದೇಶಕ್ಕೆ ಮರಳಿದ ೨೨೪ ಭಾರತೀಯರು
4. ಹಾಕಿ ಮಾಸ್ಟರ್ಸ್ ಕಪ್; ಪುರುಷರ ಸೆಮಿಫೈನಲ್‌ನಲ್ಲಿಂದು ತಮಿಳುನಾಡು-ಚಂಡೀಗಢ, ಒಡಿಶಾ- ಮಹಾರಾಷ್ಟ್ರ ಮುಖಾಮುಖಿ

***********

ಭಾರತೀಯ ಗ್ರೂಪ್ ಕ್ಯಾಪ್ಟನ್ ಶುಭಾಂಶು ಶುಕ್ಲಾ ಸೇರಿದಂತೆ ನಾಲ್ವರು ಗಗನಯಾತ್ರಿಗಳನ್ನು ಹೊತ್ತ ಆಕ್ಸಿಯಂ-೪ ಮಿಷನ್ ಇಂದು ಅಮೆರಿಕದ ಫ್ಲೋರಿಡಾದ ಕೆನೆಡಿ ಬಾಹ್ಯಾಕಾಶ ಕೇಂದ್ರದಿಂದ ಯಶಸ್ವಿಯಾಗಿ ಉಡಾವಣೆಯಾಯಿತು. ಸ್ಪೇಸ್‌ಎಕ್ಸ್ ಕಂಪನಿಯ ಫಾಲ್ಕನ್ ೯ ರಾಕೆಟ್ ಮೂಲಕ ಹೊಸ ಡ್ರ್ಯಾಗನ್ ಬಾಹ್ಯಾಕಾಶ ನೌಕೆ ಗಗನಯಾತ್ರಿಗಳ ತಂಡವನ್ನು ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣಕ್ಕೆ ಕೊಂಡೊಯ್ಯುತ್ತಿದೆ.ಈ ಮಿಷನ್‌ಗೆ ಅಮೆರಿಕದ ಅನುಭವಿ ಗಗನಯಾತ್ರಿ ಪೆಗಿ ವಿಟ್ಸನ್ ನಾಯಕತ್ವ ವಹಿಸಿದ್ದು, ಶುಭಾಂಶು ಶುಕ್ಲಾ ಪೈಲಟ್ ಆಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಉಳಿದ ಇಬ್ಬರು ಸದಸ್ಯರಾದ ಹಂಗೇರಿಯ ಟಿಬೋರ್ ಕಪು ಮತ್ತು ಪೋಲೆಂಡ್‌ನ ಸ್ಲಾವೊಸ್ ಉಜ್ನಾನ್ಸ್ಕಿ-ವಿಸ್ನೀವ್ಸ್ಕಿ, ಯೋಜನೆಯ ತಜ್ಞರಾಗಿರಲಿದ್ದಾರೆ. ಬಾಹ್ಯಾಕಾಶಕ್ಕೆ ತೆರಳುವ ವೇಳೆ ತಿಳಿಸಿರುವ ಶುಭಾಂಶು ಶುಕ್ಲಾ ಮಾತನಾಡಿ, ಇದು ತಮ್ಮ ವೈಯಕ್ತಿಕ ಪ್ರಯಾಣವಲ್ಲ. ಭಾರತದ ಮಾನವ ಬಾಹ್ಯಾಕಾಶ ಪ್ರಯಾಣವಾಗಿದೆ. ತಮ್ಮೊಂದಿಗೆ ಭಾರತದ ಧ್ವಜವನ್ನು ಕೊಂಡೊಯ್ಯುತ್ತಿದ್ದೇನೆ ಎಂದು ಅವರು ತಿಳಿಸಿದ್ದಾರೆ.

ಧ್ವನಿ: ಶುಭಾಂಶು ಶುಕ್ಲಾ ( ೪೫ ಸೆಕೆಂಡ್ಸ್)

***********

ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ -ಇಸ್ರೋ ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡ ಮಾಹಿತಿಯಂತೆ, ಆಕ್ಸಿಯಂ-೪ ಮಿಷನ್ ನಾಳೆ ಭಾರತೀಯ ಕಾಲಮಾನ ಸಂಜೆ ೪:೩೦ಕ್ಕೆ ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣ ತಲುಪಲಿದೆ. ಈ ವೇಳೆ ಗಗನಯಾತ್ರಿಗಳ ತಂಡ ಅಲ್ಲಿನ ವಾತಾವರಣದಲ್ಲಿ ಸುಮಾರು ಎರಡು ವಾರಗಳ ಕಾಲ ಸೂಕ್ಷ್ಮ ಗುರುತ್ವಾಕರ್ಷಣೆಯಲ್ಲಿ ಸಂಶೋಧನೆ, ತಂತ್ರಜ್ಞಾನ ಪ್ರಾತ್ಯಕ್ಷಿಕೆ ನಡೆಸಲಿದ್ದಾರೆ.ಈ ಮಿಷನ್‌ನಡಿ ೩೧ ರಾಷ್ಟ್ರಗಳ ೬೦ಕ್ಕೂ ಹೆಚ್ಚು ವೈಜ್ಞಾನಿಕ ಪ್ರಯೋಗಗಳನ್ನು ನಡೆಸಲಾಗುತ್ತಿದ್ದು, ಇದರಲ್ಲಿ ಹಲವಾರು ನೂತನ ಸಂಶೋಧನಾ ಕಾರ್ಯಗಳ ಮುಂದಾಳತ್ವವನ್ನು ಇಸ್ರೋ ವಹಿಸಿದೆ.ಆಕ್ಸಿಯಮ್-೪ ಮಿಷನ್ ಆರಂಭದಲ್ಲಿ ಅನೇಕ ವಿಳಂಬಗಳನ್ನು ಅನುಭವಿಸಿತು. ಆರಂಭದಲ್ಲಿ ಅನಾನುಕೂಲ ಹವಾಮಾನ, ಬಳಿಕ ಫಾಲ್ಕನ್ ೯ ರಾಕೆಟ್‌ನಲ್ಲಿ ತಾಂತ್ರಿಕ

ದೋಷಗಳು, ನಂತರ ವಿಸ್ತೃತ ಪರಿಶೀಲನೆ ಮತ್ತು ಸಮಸ್ಯೆಗಳ ಪರಿಹಾರವಾದ ನಂತರ ಇಂದು ಯಶಸ್ವಿ ಉಡಾವಣೆ ಕಂಡಿದೆ.

***********

ಗ್ರೂಪ್ ಕ್ಯಾಪ್ಟನ್ ಶುಭಾಂಶು ಶುಕ್ಲಾ, ಅಕ್ಸಿಯಮ್-೪ ಮಿಷನ್ ಸಮಯದಲ್ಲಿ ಏಳು ವಿಶೇಷ ಸೂಕ್ಷ್ಮ ಗುರುತ್ವಾಕರ್ಷಣೆ ಕುರಿತ ಪ್ರಯೋಗಗಳನ್ನು ನಡೆಸಲಿದ್ದಾರೆ ಎಂದು ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ. ಜಿತೇಂದ್ರ ಸಿಂಗ್ ತಿಳಿಸಿದ್ದಾರೆ.ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡ ಪೋಸ್ಟ್‌ನಲ್ಲಿ ಅವರು ಈ ಕುರಿತು ಮಾಹಿತಿ ಹಂಚಿಕೊಂಡಿದ್ದಾರೆ.ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಲ್ಲಿ ಸೇವಿಸಲು ಯೋಗ್ಯ ಮೈಕ್ರೋಆಲ್ಗೇಗಳ ಮೇಲೆ ಸೂಕ್ಷ್ಮ ಗುರುತ್ವಾಕರ್ಷಣೆಯ ವಿಕಿರಣ ಬೀರುವ ಪರಿಣಾಮಗಳು, ಬಾಹ್ಯಾಕಾಶದಲ್ಲಿ ಸಲಾಡ್ ಬೀಜಗಳ ಮೊಳಕೆಯೊಡೆಯುವಿಕೆ, ಸಿಬ್ಬಂದಿಯ ಪೋಷಣೆಗೆ ಸಂಬಂಧಿಸಿದ ಮಹತ್ವ ಬಾಹ್ಯಾಕಾಶದಲ್ಲಿ ಬ್ಯಾಕ್ಟೀರಿಯಾ - ಬಿಎಲ್‌ಆರ್ ಸ್ಟ್ರೇನ್‌ಗಳ ಬದುಕುಳಿಯುವಿಕೆ ಮತ್ತು ಪುನರುಜ್ಜೀವನ, ಸೇರಿದಂತೆ ವಿವಿಧ ಪ್ರಯೋಗಗಳನ್ನು ಗಗನಯಾತ್ರಿಗಳು ನಡೆಸಲಿದ್ದಾರೆ.

***********

ದೇಶಾದ್ಯಂತ ಇಂದು ಸಂವಿಧಾನ ಹತ್ಯಾ ದಿನವನ್ನು ಆಚರಿಸಲಾಗುತ್ತಿದೆ. ಇದರ ಅಂಗವಾಗಿ ದೇಶದ ನಾನಾ ಭಾಗಗಳಲ್ಲಿ ಇಂದು ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ.

***********

ತುರ್ತು ಪರಿಸ್ಥಿತಿಯ ವಿರುದ್ಧದ ಹೋರಾಟದಲ್ಲಿ ದೃಢವಾಗಿ ನಿಂತ ಪ್ರತಿಯೊಬ್ಬ ವ್ಯಕ್ತಿಗೂ ನಮಸ್ಕರಿಸುತ್ತೇವೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಸಂವಿಧಾನದಲ್ಲಿನ ತತ್ವಗಳನ್ನು ಬಲಪಡಿಸುವ ಮತ್ತು ದೇಶದ ವಿಕಸಿತ ಭಾರತದ ದೃಷ್ಟಿಕೋನವನ್ನು ಸಾಕಾರಗೊಳಿಸಲು ಒಟ್ಟಾಗಿ ಕೆಲಸ ಮಾಡುವ ಬದ್ಧತೆಯನ್ನು ಪ್ರಧಾನಿ ಪುನರುಚ್ಚರಿಸಿದ್ದಾರೆ.ಸಾಮಾಜಿಕ ಮಾಧ್ಯಮಗಳಲ್ಲಿ ಪ್ರಧಾನಿ ಮೋದಿ, ಭಾರತದ ಪ್ರಜಾಪ್ರಭುತ್ವ ಇತಿಹಾಸದ ಅತ್ಯಂತ ಕರಾಳ ಅಧ್ಯಾಯಗಳಲ್ಲಿ ಒಂದಾದ ತುರ್ತು ಪರಿಸ್ಥಿತಿ ಹೇರಲ್ಪಟ್ಟು ಇಂದು ಐವತ್ತು ವ?ಗಳು ಪೂರೈಸುತ್ತದೆ. ಭಾರತದ ಜನರು ಈ ದಿನವನ್ನು ಸಂವಿಧಾನ ಹತ್ಯಾ ದಿವಸ್ ಎಂದು ಆಚರಿಸುತ್ತಾರೆ ಎಂದರು. ಈ ದಿನದಂದು, ಭಾರತೀಯ ಸಂವಿಧಾನದಲ್ಲಿ ಪ್ರತಿಪಾದಿಸಲಾದ ಮೌಲ್ಯಗಳನ್ನು ಬದಿಗಿಡಲಾಯಿತು. ಪತ್ರಿಕಾ ಸ್ವಾತಂತ್ರ್ಯವನ್ನು ಅಳಿಸಿಹಾಕಲಾಯಿತು ಮತ್ತು ಹಲವಾರು ರಾಜಕೀಯ ನಾಯಕರು, ಸಾಮಾಜಿಕ ಕಾರ್ಯಕರ್ತರು, ವಿದ್ಯಾರ್ಥಿಗಳು ಮತ್ತು ಸಾಮಾನ್ಯ ನಾಗರಿಕರನ್ನು ಜೈಲಿಗೆ ಹಾಕಲಾಯಿತು. ದಬ್ಬಾಳಿಕೆಯ ವಿರುದ್ಧ ಎದ್ದು ನಿಂತ ಪ್ರತಿಯೊಬ್ಬ ವ್ಯಕ್ತಿಗೂ ದೇಶವು ವಂದಿಸುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

***********

ಸಂವಿಧಾನ ಹತ್ಯಾ ದಿವಸದ ಸಂದರ್ಭದಲ್ಲಿ, ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್‌ನಲ್ಲಿ ಕೇಂದ್ರ ಸಚಿವ ಅಮಿತ್ ಶಾ, ತುರ್ತು ಪರಿಸ್ಥಿತಿಯು ರಾಷ್ಟ್ರೀಯ ಅವಶ್ಯಕತೆಯಲ್ಲ. ಆದರೆ ಕಾಂಗ್ರೆಸ್ ಮತ್ತು ಒಬ್ಬ ವ್ಯಕ್ತಿಯ ಪ್ರಜಾಪ್ರಭುತ್ವ ವಿರೋಧಿ ಮನಸ್ಥಿತಿಯ ಪ್ರತಿಬಿಂಬವಾಗಿದೆ ಎಂದು ಹೇಳಿದ್ದಾರೆ.ತುರ್ತು ಪರಿಸ್ಥಿತಿಯು ಕಾಂಗ್ರೆಸ್‌ನ ಅಧಿಕಾರದ ದಾಹದಿಂದ ನಡೆಸಲ್ಪಟ್ಟ ಅನ್ಯಾಯದ ಯುಗವಾಗಿತ್ತು ಎಂದು

ಅವರು ದೂರಿದ್ದಾರೆ.ಅಧಿಕಾರವು ಸರ್ವಾಧಿಕಾರವಾಗಿ ಬದಲಾದಾಗ, ಅದನ್ನು ಬೇರು ಸಹಿತ ಕಿತ್ತುಹಾಕುವ ಶಕ್ತಿಯನ್ನು ಜನರು ಹೊಂದಿದ್ದಾರೆ ಎಂಬುದನ್ನು ಈ ದಿನ ಎಲ್ಲರಿಗೂ ನೆನಪಿಸುತ್ತದೆ. ಈ ಹೋರಾಟದಲ್ಲಿ ತಮ್ಮ ಪ್ರಾಣವನ್ನು ತ್ಯಾಗ ಮಾಡಿದವರಿಗೆ ಗೌರವ ಸಲ್ಲಿಸುವುದಾಗಿ ಕೇಂದ್ರ ಸಚಿವ ಅಮಿತ್ ಶಾ ತಿಳಿಸಿದ್ದಾರೆ.

***************

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಇಂದು ನವದೆಹಲಿಯಲ್ಲಿ 'ದಿ ಎಮರ್ಜೆನ್ಸಿ ಡೈರೀಸ್-ಇಯರ್ಸ್ ದಟ್ ಫೋರ್ಜ್ಡ್ ಎ ಲೀಡರ್' ಎಂಬ ಪುಸ್ತಕವನ್ನು ಬಿಡುಗಡೆ ಮಾಡಲಿದ್ದಾರೆ.ತುರ್ತು ಪರಿಸ್ಥಿತಿಯ ವಿರುದ್ಧದ ಹೋರಾಟದಲ್ಲಿ ಆಗಿನ ಯುವ ಆರ್.ಎಸ್.ಎಸ್ ಪ್ರಚಾರಕರಾಗಿದ್ದ ಪ್ರಧಾನಿ ನರೇಂದ್ರ ಮೋದಿಯವರ ಪಾತ್ರವನ್ನು ಈ ಪುಸ್ತಕದಲ್ಲಿ ಉಲ್ಲೇಖಿಸಲಾಗಿದೆ.ಪ್ರಜಾಪ್ರಭುತ್ವದ ಆದರ್ಶಗಳಿಗಾಗಿ ಹೋರಾಡುತ್ತಿರುವ ಪ್ರಧಾನಿ ನರೇಂದ್ರ ಮೋದಿ ಹಾಗೂ ಅದನ್ನು ಸಂರಕ್ಷಿಸಲು ಅವರು ತಮ್ಮ ಜೀವನದುದ್ದಕ್ಕೂ ಹೇಗೆ ಶ್ರಮಿಸಿದ್ದಾರೆ ಎಂಬುದನ್ನು ಪುಸ್ತಕದಲ್ಲಿ ಚಿತ್ರಿಸಲಾಗಿದೆ.

**************

ಆಪರೇ?ನ್ ಸಿಂಧು ಅಡಿಯಲ್ಲಿ ಇದುವರೆಗೆ ೮೧೮ ಭಾರತೀಯ ಪ್ರಜೆಗಳು ಇಸ್ರೇಲ್‌ನಿಂದ ಸ್ವದೇಶಕ್ಕೆ ಮರಳಿದ್ದಾರೆ.ಭಾರತೀಯ ವಾಯುಪಡೆಯ ವಿಮಾನದಲ್ಲಿ ಇಸ್ರೇಲ್‌ನಿಂದ ಇಂದು ಬೆಳಗ್ಗೆ ಭಾರತಕ್ಕೆ ಹಿಂದಿರುಗಿದ ೨೨೪ ಭಾರತೀಯ ಪ್ರಜೆಗಳನ್ನು ಕೇಂದ್ರ ಕಾರ್ಮಿಕ, ಉದ್ಯೋಗ ಹಾಗೂ ಸಣ್ಣ, ಅತಿ ಸಣ್ಣ ಮತ್ತು ಮಧ್ಯಮ ಉದ್ಯಮಗಳ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಬರಮಾಡಿಕೊಂಡರು.ಭಾರತೀಯ ಪ್ರಜೆಗಳ ಸುರಕ್ಷತೆ ಮತ್ತು ಭದ್ರತೆ ಸರ್ಕಾರಕ್ಕೆ ಆದ್ಯತೆಯಾಗಿದೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

**************

ಚೀನಾದ ಕ್ವಿಂಗ್ಡಾವೊದಲ್ಲಿ ನಡೆಯಲಿರುವ ಎರಡು ದಿನಗಳ ಶಾಂಘೈ ಸಹಕಾರ ಸಂಸ್ಥೆ-ಎಸ್‌ಸಿಓ ಸಮಾವೇಶದಲ್ಲಿ ಜಾಗತಿಕ ಶಾಂತಿ ಮತ್ತು ಭದ್ರತೆಗಾಗಿ ಭಾರತದ ದೃಷ್ಟಿಕೋನವನ್ನು ಮಂಡಿಸಲು ಮತ್ತು ಭಯೋತ್ಪಾದನೆಯನ್ನು ನಿರ್ಮೂಲನೆ ಮಾಡಲು, ಜಂಟಿ ಪ್ರಯತ್ನಗಳಿಗೆ ಕರೆ ನೀಡಲು ಎದುರು ನೋಡುತ್ತಿದ್ದೇನೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ.ಪಾಕಿಸ್ತಾನ ಬೆಂಬಲಿತ ಗಡಿಯಾಚೆಗಿನ ಭಯೋತ್ಪಾದನೆಯ ವಿರುದ್ಧ ಹೊಸ ರಾಜತಾಂತ್ರಿಕ ನಡೆಯಲ್ಲಿ, ಭಯೋತ್ಪಾದನೆಯನ್ನು ನಿಗ್ರಹಿಸುವ ಪ್ರಯತ್ನಗಳನ್ನು ತೀವ್ರಗೊಳಿಸುವಂತೆ ಆಗ್ರಹಿಸಲಾಗುವುದು ಎಂದು ಸಾಮಾಜಿಕ ಜಾಲತಾಣದ ಪೋಸ್ಟ್‌ನಲ್ಲಿ ರಕ್ಷಣಾ ಸಚಿವರು ತಿಳಿಸಿದ್ದಾರೆ. ಇಂದು ಮತ್ತು ನಾಳೆ ನಡೆಯಲಿರುವ ಎಸ್‌ಸಿಓ ರಕ್ಷಣಾ ಸಚಿವರ ಸಭೆಯಲ್ಲಿ ಭಾಗವಹಿಸಲು ಸಚಿವ ರಾಜನಾಥ್ ಸಿಂಗ್, ಚೀನಾದ ಪೂರ್ವ ಶಾಂಡೊಂಗ್ ಪ್ರಾಂತ್ಯದ ಬಂದರು ನಗರ ಕ್ವಿಂಗ್ಡಾವೊಗೆ ಭೇಟಿ ನೀಡಲಿದ್ದಾರೆ.

**************

ಇಂಡಿಯಾ ಮಾಸ್ಟರ್ಸ್ ಕಪ್ ಹಾಕಿ ಪಂದ್ಯಾವಳಿಯು ಸೆಮಿಫೈನಲ್ ಹಂತವನ್ನು ತಲುಪಿದ್ದು, ಪುರುಷ ಮತ್ತು ಮಹಿಳಾ ವಿಭಾಗಗಳಲ್ಲಿ ರೋಮಾಂಚಕಾರಿ ಹಣಾಹಣಿಗಳು ನಡೆಯಲಿವೆ. ಪುರುಷರ

ವಿಭಾಗದಲ್ಲಿ, ತಮಿಳುನಾಡು ಇಂದು ಚಂಡೀಗಢವನ್ನು ಎದುರಿಸಲಿದೆ. ಇನ್ನೊಂದೆಡೆ, ಒಡಿಶಾ ಇಂದು ಮಹಾರಾಷ್ಟ್ರವನ್ನು ಎದುರಿಸಲಿದೆ. ಮಹಿಳಾ ವಿಭಾಗದಲ್ಲಿ, ನಾಳೆ ತಮಿಳುನಾಡು ವಿರುದ್ಧ ಒಡಿಶಾ ಹಾಗೂ ಹರಿಯಾಣ ವಿರುದ್ಧ ಪಂಜಾಬ್ ಸೆಣಸಲಿದೆ.

****************

ಗಾಜಾ ಪಟ್ಟಿಯಾದ್ಯಂತ ಇಸ್ರೇಲ್ ನಡೆಸಿದ ಗುಂಡಿನ ದಾಳಿ ಮತ್ತು ವಾಯುದಾಳಿಗಳಲ್ಲಿ ಕನಿಷ್ಠ ೨೦ ಪ್ಯಾಲೆಸ್ಟೀನಿಯನ್ನರು ಸಾವನ್ನಪ್ಪಿದ್ದಾರೆ ಎಂದು ವರದಿಯಾಗಿದೆ. ದಕ್ಷಿಣ ಗಾಜಾ ಪಟ್ಟಿಯ ರಫಾದ ಉತ್ತರದಲ್ಲಿರುವ ಶಕೌಶ್ ಪ್ರದೇಶದಲ್ಲಿ ಅಮೆರಿಕ ಬೆಂಬಲಿತ ನೆರವು ವಿತರಣಾ ಕೇಂದ್ರದ ಬಳಿ ನೆರೆದಿದ್ದ ಪ್ಯಾಲೆಸ್ಟೀನಿಯನ್ನರ ದೊಡ್ಡ ಗುಂಪಿನ ಮೇಲೆ ಇಸ್ರೇಲ್ ಪಡೆಗಳು ಗುಂಡು ಹಾರಿಸಿದವು ಎಂದು ಪ್ರತ್ಯಕ್ಷದರ್ಶಿಗಳು ಮಾಧ್ಯಮಗಳಿಗೆ ತಿಳಿಸಿದ್ದಾರೆ.

****************

ಇಂದು ಕರಾವಳಿ ಕರ್ನಾಟಕ, ಗುಜರಾತ್, ಹರಿಯಾಣ, ಚಂಡೀಗಢ, ದೆಹಲಿ, ಹಿಮಾಚಲ ಪ್ರದೇಶ, ಜಮ್ಮು ಮತ್ತು ಕಾಶ್ಮೀರ, ಲಡಾಖ್, ಕೊಂಕಣ, ಗೋವಾ, ಮಹಾರಾಷ್ಟ್ರ, ಒಡಿಶಾ, ಪಂಜಾಬ್, ಉತ್ತರಾಖಂಡ ಮತ್ತು ಉತ್ತರ ಪ್ರದೇಶದ ಕೆಲವು ಸ್ಥಳಗಳಲ್ಲಿ ಭಾರೀ ಮಳೆಯಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.ಮುಂದಿನ ೫ ದಿನಗಳಲ್ಲಿ ಗುಜರಾತ್, ಕೊಂಕಣ, ಗೋವಾ, ಮಹಾರಾಷ್ಟ್ರ, ಮರಾಠವಾಡ, ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳು, ಮಧ್ಯಪ್ರದೇಶ, ವಿದರ್ಭದಲ್ಲಿಯೂ ಸಹ ಹಗುರದಿಂದ ಮಧ್ಯಮ ಮಳೆಯಾಗುವ ಸಾಧ್ಯತೆ ಇದೆ.ದೇಶದ ಈಶಾನ್ಯ ಮತ್ತು ವಾಯುವ್ಯ ಭಾಗಗಳ ಜೊತೆಗೆ ಛತ್ತೀಸ್‌ಗಢ, ಪಶ್ಚಿಮ ಬಂಗಾಳ, ಬಿಹಾರ, ಜಾರ್ಖಂಡ್, ಒಡಿಶಾದಲ್ಲಿಯೂ ಸಹ ಮುಂದಿನ ೫ ದಿನಗಳಲ್ಲಿ ಹಗುರದಿಂದ ಮಧ್ಯಮ ಮಳೆಯಾಗುವ ನಿರೀಕ್ಷೆಯಿದೆ ಇದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

*********END*******